ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅರಣ್ಯ ಪ್ರದೇಶ ಆಕ್ರಮಿಸಿ ಗಣಿಗಾರಿಕೆ ನಡೆಸುತ್ತಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

905 (1103) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳೆಷ್ಟು; ಇಂತಹ ಪ್ರಕರಣಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಿಗೆ ಈವರೆಗೆ ದಂಡ ವಿಧಿಸಲಾಗಿದೆ; ಅದರ ಪ್ರತಿಗಳನ್ನು ನೀಡುವುದು;

(ಇ) ಅತಿಕ್ರಮಣ ಮಾಡಿರುವ ಪ್ರದೇಶವನ್ನು ಸರ್ಕಾರ ವಾಪಸ್ ಪಡೆಯಲು ತೆಗೆದುಕೊಂಡ ಕ್ರಮಗಳೇನು; ತಪ್ಪಿತಸ್ಥ ಇಲಾಖಾ ಅಧಿಕಾರಿಗಳು ಮತ್ತು ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)